ಆ) ಭಾರಿ ಮಳೆ ಬಂದಿದ್ದಲ್ಲಿ ಕೆಲವು ಸಮಯ ವಾಹನಗಳ ಸಂಚಾರಕ್ಕೆ ತೊಂದರೆಯಾಗುವುದು ಗಮನಕ್ಕೆ ಬಂದಿರುತ್ತದೆ.

ಇ) ಈ) ಉ)

ಸೇತುವೆಯನ್ನು ನಿರ್ಮಿಸಲು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. ಅನುದಾನದ ಲಭ್ಯತೆಯನ್ನು ಆಧರಿಸಿ ಯಾವುದಾದರೂ ಯೋಜನೆಯಡಿ ನಿರ್ಮಾಣ ಕ್ರಮವನ್ನು ಕೈಗೊಳ್ಳಲಾಗುವುದು.

....

141 (125) : ಶ್ರೀ ಪ್ರಭಾಕರ ಬಂಗೇರ .ಕೆ (ಬೆಳ್ತಂಗಡಿ) ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಜಲಾನಯನ ಮತ್ತು ವಿಶ್ವ ಬ್ಯಾಂಕಿನ ಸುಜಲ ಜಲಾನಯನ ಅಭಿವೃದ್ಧಿ ಯೋಜನೆಗಳ ವಿವರಗಳೇನು;

ಆ) ಸುಜಲ ಜಲಾನಯನ ಅಭಿವೃದ್ಧಿ ಯೋಜನೆಯಡಿಯಲ್ಲಿ ವಿಶ್ವ ಬ್ಯಾಂಕಿನಿಂದ ಪಡೆದ ನೆರವಿನ ಮೊತ್ತ ಎಷ್ಟು;

ಇ) ಅದನ್ನು ಯಾವ ಯೋಜನೆಗಳಿಗೆ ವಿನಿಯೋಗಿಸಲು ಉದ್ದೇಶಿಸಲಾಗಿದೆ?

ಶ್ರೀ ಕೆ. ಶ್ರೀನಿವಾಸಗೌಡ (ಕೃಷಿ ಸಚಿವರು)

ಅ) 677.73 ಕೋಟಿ ರೂ.ಗಳ ವಿಶ್ವ ಬ್ಯಾಂಕಿನ ನೆರವಿನ ಸುಜಲ ಜಲಾನಯನ ಅಭಿವೃದ್ಧಿ ಯೋಜನೆಯನ್ನು ರಾಜ್ಯದ ಚಿತ್ರದುರ್ಗ, ಧಾರವಾಡ, ಹಾವೇರಿ, ಕೋಲಾರ ಮತ್ತು ತುಮಕೂರು ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ 38 ತಾಲ್ಲೂಕುಗಳಲ್ಲಿ ಹರಡಿರುವ 1270 ಗ್ರಾಮಗಳ 508626 ಹೆಕ್ಟೇರು ಪ್ರದೇಶದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯ ಅವಧಿಯು 2001 ರಿಂದ 2007 ರ ವರೆಗೆ ಐದುವರೆ ವರ್ಷಗಳಾಗಿರುತ್ತದೆ.

ಆ) ವಿಶ್ವ ಬ್ಯಾಂಕಿನಿಂದ ಈವರೆಗೆ 2771.01 ಲಕ್ಷ ರೂ.ಗಳನ್ನು ಪಡೆಯಲಾಗಿದೆ.

ಇ) ಈ ಎಲ್ಲಾ ಹಣವನ್ನು ಸುಜಲಾ ಯೋಜನೆಗಾಗಿ ಮಾತ್ರ ಬಳಸಲು ಉದ್ದೇಶಿಸಲಾಗಿದೆ.

....

142 (355) : ಶ್ರೀ ಪ್ರಕಾಶ್ ಖಂಡ್ರೆ (ಬಾಲ್ಕಿ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕಳೆದ 3 ವರ್ಷದಲ್ಲಿ ಬೀದರ್ ಜಿಲ್ಲೆಯ ಲೋಕೋಪಯೋಗಿ ಇಲಾಖೆಯ ರಸ್ತೆಗಳಲ್ಲಿ ತಗ್ಗು ಗುಂಡಿಗಳು ಹೆಚ್ಚಾಗಿದ್ದು, ಸಾರ್ವಜನಿಕರ ಸಂಚಾರಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಇಷ್ಟು ದೊಡ್ಡ ಪ್ರಮಾಣದಲ್ಲಿ ಬಿದ್ದುರುವ ತಗ್ಗು ಗುಂಡಿಗಳನ್ನು ಮುಚ್ಚದೆ ನಿರ್ಲಕ್ಷ್ಯ ವಹಿಸಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಏನು ಕ್ರಮ ಕೈಗೊಂಡಿದೆ;

ಇ) ಬೀದರ್ ಜಿಲ್ಲೆಯ ತಾಲ್ಲೂಕಿನಿಂದ ತಾಲ್ಲೂಕಿಗೆ ಜೋಡಿಸುವ ರಸ್ತೆಗಳ ಅಭಿವೃದ್ಧಿ ಕೆಲಸ ತೆಗೆದುಕೊಳ್ಳದೆ ಇರುವುದು ಸರ್ಕಾರದ ಗಮನದಲ್ಲಿದೆಯೇ;

ಈ) ಗಮನದಲ್ಲಿದ್ದರೆ, ಇದಕ್ಕೆ ಕಾರಣವೇನು ಮತ್ತು ಇದನ್ನು ಯಾವಾಗ ಪ್ರಾರಂಭ ಮಾಡಲಾಗುವುದು?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಬಂದಿರುತ್ತದೆ.

ಆ) ಲಭ್ಯವಿರುವ ಅನುದಾನಕ್ಕನುಗುಣವಾಗಿ ಬಿದ್ದಿರುವ ತಗ್ಗು ಗುಂಡಿಗಳನ್ನು ಮುಚ್ಚಲು ಸಂಬಂಧಪಟ್ಟ ಸಹಾಯ ನಿರ್ವಾಹಕ ಇಂಜಿನಿಯರುಗಳಿಗೆ ನಿರ್ದೇಶನ ನೀಡಿದ್ದು, ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ರಸ್ತೆ ನಿರ್ವಹಣೆ ಕೈಗೊಳ್ಳಲಾಗುತ್ತಿದ್ದು ಯಾವುದೇ ನಿರ್ಲಕ್ಷತೆ ವಹಿಸಿರುವುದಿಲ್ಲ.

ಇ) ಬೀದರ್ ಜಿಲ್ಲೆಯಲ್ಲಿ ತಾಲ್ಲೂಕಿನಿಂದ ತಾಲ್ಲೂಕಿಗೆ ಜೋಡಿಸುವ ರಸ್ತೆಗಳ ಅಭಿವೃದ್ಧಿಗೆ ಸಂಬಂಧಿಸಿದಂತೆ ಯಾವುದೇ ಪ್ರತ್ಯೇಕವಾದ ಯೋಜನೆಗಳಿರುವುದಿಲ್ಲ.

ಈ) ಅನ್ವಯಿಸುವುದಿಲ್ಲ.

....

143 (358) : ಶ್ರೀ ಪ್ರಕಾಶ್ ಖಂಡ್ರೆ (....) ಮಾನ್ಯ ಜಲ ಸಂಪನ್ಮೂಲ ಹಾಗೂ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ಹರಿಯುವ ಮಾಂಜ್ರಾ ನದಿಗೆ ಒಟ್ಟು ನಾಲ್ಕು ಬ್ಯಾರೇಜು ನಿರ್ಮಾಣ ಮಾಡುವ ಬಗೆಗಿನ ಕಳೆದ ಸರ್ಕಾರದ ಆಶ್ವಾಸನೆ ಸರ್ಕಾರದ ಗಮನದಲ್ಲಿದೆಯೆ;

ಆ) ಈ ಕೆಲಸವು ಯಾವ ಹಂತದಲ್ಲಿದೆ ಹಾಗೂ ಇದನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಹಾಗೂ ಸಾರಿಗೆ ಸಚಿವರು)

ಅ) ಬೀದರ್ ಜಿಲ್ಲೆಯಲ್ಲಿ ಹರಿಯುವ ಮಾಂಜ್ರಾ ನದಿಗೆ ಈ ಕೆಳಗೆ ವಿವರಿಸಿರುವಂತೆ ನಾಲ್ಕು ಬ್ಯಾರೇಜು ನಿರ್ಮಾಣ ಮಾಡುವ ಕಾರ್ಯಕ್ರಮವಿದೆ.

ಕ್ರ ಸಂ	ಹೆಸರು	ಅಂದಾಜು ವೆಚ್ಚ (ರೂ. ಲಕ್ಷಗಳಲ್ಲಿ)	ನೀರಿನ ಬಳಕೆ (ಟಿಎಂಸಿ)	ನೀರಾವರಿ ಕ್ಷೇತ್ರ (ಹೆಕ್ಟೇರ್)
1.	ಜರಗಿಹಾಳ್	641.00	0.78	1980
2.	ಮಣಿಕೇಶ್ವರ್	516.00	0.78	1980
3.	ಹಾಲಹಳ್ಳಿ	520.00	2.46	6732
4.	ಚಂದಾಪುರ	499.00	0.78	1980
	ಒಟ್ಟು	**2176.00**	**4.80**	**12672**

ಆ) ಸದರಿ ನಾಲ್ಕು ಬ್ಯಾರೇಜ್‌ಗಳ ಕಾಮಗಾರಿಗಳನ್ನು ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತದ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿದ್ದು ಸರ್ವೇ ಹಾಗೂ ಅನ್ವೇಷಣೆ ಕಾರ್ಯಗಳು ಪ್ರಗತಿಯಲ್ಲಿರುತ್ತದೆ.

....

144 (321) : ಶ್ರೀ ರವಿ ಸಿ.ಟಿ. (ಚಿಕ್ಕಮಗಳೂರು) ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?